# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಂ.ವಿ.ಶ್ರೀನಿವಾಸಲು, ಸಹಾಯಕ ಇಂಜಿನಿಯರ್-2, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೆಬ್ಬಗೋಡಿ ಗ್ರಾಮ ಪಂಚಾಯತ್, ಆನೇಕಲ್ ತಾಲ್ಲೂಕು, ಬೆಂಗಳೂರು (ನಗರ) ಇವರ ವಿರುದ್ಧ ಇಲಾಖಾ ವಿಚಾರಣೆ ಬಗ್ಗೆ.

**ಓದಲಾಗಿದೆ:-** ಅಪರ ನಿಬಂಧಕರು, ವಿಚಾರಣೆಗಳು-10. ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. ಕಂಪ್ಲೆಂಟ್ /ಉಪಲೋಕ್ /ಬಿಸಿಡಿ/2844/2012/ ಎಆರ್ಇ-10 ದಿನಾಂಕ 4-4-2013.

------

**ಪ್ರಸ್ತಾವನೆ**

ಆನೇಕಲ್ ತಾಲ್ಲೂಕಿನ ನೆರಳೂರು ಗ್ರಾಮದ ಆಂಜನೇಯಸ್ವಾಮಿ ದೇವಸ್ಥಾನದಿಂದ ಈಶ್ವರ ದೇವಸ್ಥಾನದ ವರೆಗಿನ ಪೈಪ್‌ಲೈನ್ ಕೆಲಸ ಹಾಗೂ ರಸ್ತೆ ಅಭಿವೃದ್ಧಿ ಕೆಲಸವನ್ನು ಮತ್ತು ಅದೇ ಗ್ರಾಮದಲ್ಲಿ ಇನ್ನೊಂದು ರಸ್ತೆಯ ಮೆಟಲಿಂಗ್ ಕೆಲಸವನ್ನು ಮಾಡಿದ್ದು, ಈ ಎರಡು ಕಾಮಗಾರಿಗಳಿಗೆ ಸಂಬಂಧಿಸಿದಂತೆ ಬಿಲ್ಲುಗಳನ್ನು ತಯಾರು ಮಾಡಲು ಶ್ರೀ ಎಂ.ವಿ.ಶ್ರೀನಿವಾಸಲು, ಸಹಾಯಕ ಇಂಜಿನಿಯರ್ – 2, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಆನೇಕಲ್ ರವರು ರೂ. 20,000/- ಗಳ ಅಕ್ರಮ ಸಂಭಾವನೆಯನ್ನು ಒತ್ತಾಯ ಮಾಡಿರುತ್ತಾರೆಂದು ಫಿರ್ಯಾದುದಾರರಾದ ಶ್ರೀ ಎಸ್.ಮಂಜುನಾಥ ಬಿನ್ ಶಂಕರಪ್ಪ, ಆನೇಕಲ್ ರವರು ನೀಡಿದ್ದ ದೂರಿನ ಮೇರೆಗೆ, ಪೋಲೀಸ್ ಇನ್ಸ್‌ಪೆಕ್ಟರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಗ್ರಾಮಾಂತರ ರವರು ಮೊಕದ್ದಮೆ ಸಂಖ್ಯೆ. 01/2012ನ್ನು ದಾಖಲಿಸಿಕೊಂಡು ನಡೆಸಿದ ತನಿಖೆಯಲ್ಲಿ ಶ್ರೀ ಎಂ.ವಿ.ಶ್ರೀನಿವಾಸಲು, ಸಹಾಯಕ ಇಂಜಿನಿಯರ್ – 2, ಅಕ್ರಮ ಸಂಭಾವನೆಗೆ ಒತ್ತಾಯಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ, ಸದರಿಯವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14 (ಎ) ರ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಕರ್ನಾಟಕ ಲೋಕಾಯುಕ್ತಕ್ಕೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತರು ಸಲ್ಲಿಸಿರುವ ವರದಿಯನ್ನು ಮೇಲೆ ದಿನಾಂಕ. 4-4-2013ರ ಪತ್ರದೊಂದಿಗೆ ಅಪರ ನಿಬಂಧಕರು ವಿಚಾರಣೆಗಳು-10 ರವರು ಕಳುಹಿಸುತ್ತಾ, ಅದರಂತೆ ಕ್ರಮವಹಿಸುವಂತೆ ಕೋರಿರುತ್ತಾರೆ.

ಕರ್ನಾಟಕ ಉಪ ಲೋಕಾಯುಕ್ತರ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀ ಎಂ.ವಿ.ಶ್ರೀನಿವಾಸಲು, ಸಹಾಯಕ ಇಂಜಿನಿಯರ್ – 2, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಆನೇಕಲ್ ರವರು ರೂ. 20,000/- ಗಳ ಅಕ್ರಮ ಸಂಭಾವನೆಯನ್ನು ಬಯಸಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದ್ದರಿಂದ, ಸದರಿ ಆರೋಪಿತ ಅಧಿಕಾರಿ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

**ಆದೇಶ ಸಂಖ್ಯೆ ಗ್ರಾಅಪ 6 ಇಎನ್‌ಕ್ಯೂ 2013 ಬೆಂಗಳೂರು ದಿನಾಂಕ 27-05-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಎಂ.ವಿ.ಶ್ರೀನಿವಾಸಲು, ಸಹಾಯಕ ಇಂಜಿನಿಯರ್ – 2, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಆನೇಕಲ್ ಇವರ

---2

ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಹೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) ರ ಪ್ರಕಾರ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ

ಸಂಕಲನಕಾರರು,ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

ಪ್ರತಿ;

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಉಪ ಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯತ್, ಬೆಂಗಳೂರು.
9. ಶ್ರೀ ಎಂ.ವಿ.ಶ್ರೀನಿವಾಸಲು, ಸಹಾಯಕ ಇಂಜಿನಿಯರ್ - 2, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಆನೇಕಲ್.
10. ಮಾನ್ಯ ಉಪ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರಿಗೆ.
11. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು - ಸಿ).
12. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
13. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್